(5)

## ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ತಿಪ್ಪಣ್ಣಪ್ಪ ಕಮಕನೂರ ಇವರ ನಿಯಮ 72ರಡಿ ಕೋರಿರುವ ಗಮನ ಸೆಳೆಯುವ ಸೂಚನೆಗೆ ಉತ್ತರ

**ವಿಷಯ:**

ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳಿಗಾಗಿ ವಸತಿನಿಲಯಗಳ ಸಂಖ್ಯೆಯನ್ನು ಹೆಚ್ಚಿಸುವುದು ಸೇರಿದಂತೆ ವಸತಿನಿಲಯಗಳ ಸ್ವಂತ ಕಟ್ಟಡಗಳ ನಿರ್ಮಾಣಕ್ಕೆ ಸರ್ಕಾರ ಕೈಗೊಂಡಿರುವ ಕ್ರಮಗಳು ಮತ್ತು ಹೆಚ್ಚಿನ ಸಂಖ್ಯೆಯಲ್ಲಿ ವಿದ್ಯಾರ್ಥಿಗಳಿಗೆ ಪ್ರವೇಶಾತಿಯನ್ನು ದೊರಕಿಸಿಕೊಡಬೇಕೆನ್ನುವುದರ ಬಗ್ಗೆ.

**ಉತ್ತರ:**

ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ವತಿಯಿಂದ ಪ್ರಸ್ತುತ 1281 ಮೆಟ್ರಿಕ್-ಪೂರ್ವ ಹಾಗೂ 1161 ಮೆಟ್ರಿಕ್-ನಂತರದ ವಿದ್ಯಾರ್ಥಿನಿಲಯಗಳಂತೆ ಒಟ್ಟು 2442 ವಿದ್ಯಾರ್ಥಿನಿಲಯಗಳು ಕಾರ್ಯನಿರ್ವಹಿಸುತ್ತಿದ್ದು, ಇವುಗಳಲ್ಲಿ ಒಟ್ಟಾರೆ 228286 ವಿದ್ಯಾರ್ಥಿಗಳಿಗೆ ಪ್ರವೇಶಾತಿ ಕಲ್ಪಿಸಲಾಗಿರುತ್ತದೆ. 2022-23ನೇ ಸಾಲಿನಲ್ಲಿ ರಾಜ್ಯದ ಮೆಟ್ರಿಕ್-ನಂತರದ ವಿದ್ಯಾರ್ಥಿನಿಲಯಗಳಲ್ಲಿನ ಸಂಖ್ಯಾಬಲವನ್ನು ಶೇ.25% ರಂತೆ ಹೆಚ್ಚಿಸಿ 30000 ವಿದ್ಯಾರ್ಥಿಗಳಿಗೆ ಪ್ರವೇಶಾವಕಾಶವನ್ನು ಕಲ್ಪಿಸಲಾಗಿರುತ್ತದೆ.

ಮುಂದುವರೆದು ಪ್ರತಿವರ್ಷ ವಿದ್ಯಾರ್ಥಿನಿಲಯಗಳ ಪ್ರವೇಶ ಪ್ರಕ್ರಿಯೆ ನಂತರ ಜಿಲ್ಲೆಯಲ್ಲಿನ ಆಯಾ ತಾಲ್ಲೂಕಿನ ವಿದ್ಯಾರ್ಥಿನಿಲಯಗಳಲ್ಲಿ ಹೆಚ್ಚಿನ ಅರ್ಜಿಗಳ ಸ್ವೀಕೃತಿಗೆ ಪರ್ಯಾಯವಾಗಿ ಆಯಾ ಸಾಲಿಗೆ ಅನ್ವಯಿಸುವಂತೆ ಬೇಡಿಕೆ ಇರುವ ವಿದ್ಯಾರ್ಥಿನಿಲಯಗಳಿಗೆ ತಾತ್ಕಾಲಿಕವಾಗಿ ಸ್ಥಾನಗಳನ್ನು ಆಂತರಿಕ ವರ್ಗಾವಣೆ ಮಾಡಿಕೊಂಡು ಹೆಚ್ಚುವರಿ ವಿದ್ಯಾರ್ಥಿಗಳಿಗೆ ಪ್ರವೇಶಾವಕಾಶವನ್ನು ಕಲ್ಪಿಸಲಾಗುತ್ತದೆ.

ಹೊಸ ವಿದ್ಯಾರ್ಥಿನಿಲಯಗಳ ಮಂಜೂರಾತಿಯು ರಾಜ್ಯದ ಒಟ್ಟಾರೆ ಬೇಡಿಕೆ ಹಾಗೂ ಅನುದಾನದ ಲಭ್ಯತೆಯನ್ನು ಅವಲಂಬಿಸಿದ್ದು, ಅನುದಾನದ ಲಭ್ಯತೆ ಹಾಗೂ ಬೇಡಿಕೆಯನುಸಾರ ಹೊಸ ವಿದ್ಯಾರ್ಥಿನಿಲಯಗಳ ಮಂಜೂರಾತಿಗೆ ಅಗತ್ಯ ಕ್ರಮವಹಿಸಲಾಗುವುದು.

ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಡಿ ಕಾರ್ಯನಿರ್ವಹಿಸುತ್ತಿರುವ ಒಟ್ಟು 2442 ವಿದ್ಯಾರ್ಥಿನಿಲಯಗಳ ಪೈಕಿ 1611 ವಿದ್ಯಾರ್ಥಿನಿಲಯಗಳು ಸ್ವಂತ ಕಟ್ಟಡಗಳಲ್ಲಿ, 680 ವಿದ್ಯಾರ್ಥಿನಿಲಯಗಳು ಬಾಡಿಗೆ ಕಟ್ಟಡಗಳಲ್ಲಿ ಹಾಗೂ 151 ವಿದ್ಯಾರ್ಥಿನಿಲಯಗಳು ಉಚಿತ ಕಟ್ಟಡಗಳಲ್ಲಿ ಕಾರ್ಯನಿರ್ವಹಿಸುತ್ತಿವೆ. ಪ್ರಸ್ತುತ ವಿದ್ಯಾರ್ಥಿನಿಲಯಗಳ ಕಟ್ಟಡ ನಿರ್ಮಾಣಕ್ಕೆ 485 ನಿವೇಶನಗಳು ಲಭ್ಯವಿದ್ದು, 170 ವಿದ್ಯಾರ್ಥಿನಿಲಯಗಳ ಕಟ್ಟಡ ನಿರ್ಮಾಣ ಕಾಮಗಾರಿ ಪ್ರಗತಿಯಲ್ಲಿವೆ. ನಿವೇಶನ ಲಭ್ಯತೆ ಹಾಗೂ ಆಯವ್ಯಯದ ಲಭ್ಯತೆಯನುಗುಣವಾಗಿ ಹಂತ ಹಂತವಾಗಿ ವಿದ್ಯಾರ್ಥಿನಿಲಯಗಳ ಕಟ್ಟಡ ನಿರ್ಮಾಣವನ್ನು ಕೈಗೊಳ್ಳಲಾಗುವುದು.

ಆಯುಕ್ತರು
ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ
ಬೆಂಗಳೂರು.